Akashvani: Bangalore
National Bulletin In Kannada
21.02.2026 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

21.02.2026 : 7.35AM
********

ಮುಖ್ಯಾಂಶಗಳು :

- ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆ ತರುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಒತ್ತಾಯ
- ಉತ್ತರ ಪ್ರದೇಶದ ಮೀರತ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ೧೨ ಸಾವಿರದ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ಆರು ದಿನಗಳ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ಇಂದು ಸಂಪನ್ನ
- ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಬಿ ಗುಂಪಿನ ಕೊನೆಯ ಲೀಗ್ ಪಂದ್ಯದಲ್ಲಿ ಒಮಾನ್ ವಿರುದ್ಧ ಆಸ್ಟ್ರೇಲಿಯಾ ತಂಡಕ್ಕೆ ೯ ವಿಕೆಟ್‌ಗಳ ಭರ್ಜರಿ ಗೆಲುವು

**********

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆ ತರಬೇಕು ಮತ್ತು ಜಾಗತಿಕ ದಕ್ಷಿಣವು ನಿರ್ಧಾರ ತೆಗೆದುಕೊಳ್ಳುವಲ್ಲಿ ಹೆಚ್ಚಿನ ಪಾತ್ರವನ್ನು ಹೊಂದಿರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರೊಂದಿಗಿನ ಸಭೆಯ ಸಂದರ್ಭದಲ್ಲಿ ಮಾತನಾಡಿದ ಅವರು, ಜಾಗತಿಕ ಅನಿಶ್ಚಿತತೆಯ ಈ ಸಮಯದಲ್ಲಿ ಜಗತ್ತು ನಂಬಿಕೆಯ ಕೊರತೆ ಸೇರಿದಂತೆ ಪ್ರಮುಖ ಸವಾಲುಗಳನ್ನು ಎದುರಿಸುತ್ತಿದೆ ಎಂದು ಹೇಳಿದರು. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತುರ್ತು ಸುಧಾರಣೆಯು ವಿಶ್ವಸಂಸ್ಥೆಯ ಪ್ರಸ್ತುತತೆ ಮತ್ತು ಪರಿಣಾಮಕಾರಿತ್ವವನ್ನು ಕಾಪಾಡಿಕೊಳ್ಳಲು ಪ್ರಮುಖವಾಗಿದೆ. ಯುಎನ್-೮೦ ಉಪಕ್ರಮವು ಸುಧಾರಣೆಗಳಿಗೆ ಉತ್ತಮ ವೇದಿಕೆ ಒದಗಿಸಿದೆ.

ಆದರೂ, ಯಾವುದೇ ಪುನರ್ರಚನೆ ಕಾರ್ಯದಲ್ಲಿ ಜಾಗತಿಕ ದಕ್ಷಿಣದ ಅಭಿವೃದ್ಧಿಯ ಆದ್ಯತೆಗಳನ್ನು ರಕ್ಷಿಸುವುದು ಮುಖ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದರು. ಸಭೆಯಲ್ಲಿ, ಯಶಸ್ವಿ ಎಐ ಇಂಪ್ಯಾಕ್ಟ್ ಶೃಂಗಸಭೆಯನ್ನು ಆಯೋಜಿಸುವಲ್ಲಿ ಭಾರತದ ನಾಯಕತ್ವವನ್ನು ಮತ್ತು ವಿವಿಧ ಕ್ಷೇತ್ರಗಳಲ್ಲಿ ವಿಶ್ವಸಂಸ್ಥೆಯೊಂದಿಗೆ ಅದರ ದೀರ್ಘಕಾಲದ ಸಹಯೋಗವನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಶ್ಲಾಘಿಸಿದರು.

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉತ್ತರ ಪ್ರದೇಶದ ಮೀರತ್‌ಗೆ ಭೇಟಿ ನೀಡಲಿದ್ದಾರೆ. ಶತಾಬ್ದಿ ನಗರ ನಮೋ ಭಾರತ್ ನಿಲ್ದಾಣದಲ್ಲಿ ಮೀರತ್ ಮೆಟ್ರೋ ಮತ್ತು ನಮೋ ಭಾರತ್ ರೈಲಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅವರು ಮೀರತ್ ದಕ್ಷಿಣ ನಿಲ್ದಾಣದವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಅವರು ಸುಮಾರು ೧೨ ಸಾವಿರದ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ೮೨ ಕಿಲೋಮೀಟರ್ ಉದ್ದದ ದೆಹಲಿ-ಮೀರತ್ ನಮೋ ಭಾರತ್ ಕಾರಿಡಾರ್ ಮತ್ತು ದೇಶದ ಮೊದಲ ನಮೋ ಭಾರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆಯ ಉಳಿದ ವಿಭಾಗಗಳನ್ನು ಅವರು ಉದ್ಘಾಟಿಸಲಿದ್ದಾರೆ. ಈ ಯೋಜನೆಗಳು ನಗರ ಚಲನಶೀಲತೆಯನ್ನು ಪರಿವರ್ತಿಸುವ ಮತ್ತು ನಾಗರಿಕರ ಜೀವನ ಸುಲಭತೆಯನ್ನು ಸುಧಾರಿಸುವ ತಡೆರಹಿತ, ಪರಿಣಾಮಕಾರಿ, ಆಧುನಿಕ ಮತ್ತು ಸುಸ್ಥಿರ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಮತ್ತಷ್ಟು ಉತ್ತೇಜನ ನೀಡುತ್ತವೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಇಂದು ಉತ್ತರ ಪ್ರದೇಶದ ಯಮುನಾ ಎಕ್ಸ್‌ಪ್ರೆಸ್‌ವೇ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರದಲ್ಲಿ ಎಚ್‌ಸಿಎಲ್-ಫಾಕ್ಸ್‌ಕಾನ್ ಜಂಟಿ ಉದ್ಯಮ ಯೋಜನೆಯ ಶಿಲಾನ್ಯಾಸ ನೆರವೇರಿಸದ್ದಾರೆ. ದೇಶೀಯ ಉತ್ಪಾದನಾ ಸಾಮರ್ಥ್ಯಗಳನ್ನು ಬಲಪಡಿಸಲು, ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ಸ್ಥಿತಿಸ್ಥಾಪಕ ಜಾಗತಿಕ ಪೂರೈಕೆ ಸರಪಳಿಗಳನ್ನು ನಿರ್ಮಿಸಲು ಸರ್ಕಾರದ ಪ್ರಯತ್ನಗಳಿಗೆ ಈ ಯೋಜನೆ ಬಲ ನೀಡಲಿದೆ.

ಈ ಉಪಕ್ರಮದೊಂದಿಗೆ, ದೇಶದ ಅರೆವಾಹಕ ಪರಿಸರ ವ್ಯವಸ್ಥೆಯು ಪ್ರಮುಖ ಉತ್ತೇಜನ ಪಡೆಯುತ್ತದೆ. ನಾವೀನ್ಯತೆ, ಕೌಶಲ್ಯ ಅಭಿವೃದ್ಧಿ ಮತ್ತು ತಂತ್ರಜ್ಞಾನ ವರ್ಗಾವಣೆಯನ್ನು ಇದು ಉತ್ತೇಜಿಸುತ್ತದೆ.

**********

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಲಿಚ್ಟನ್‌ಸ್ಟೈನ್ ರಾಜಕುಮಾರ ಅಲೋಹಿಸ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ನಡುವೆ ವಿಶೇಷವಾಗಿ ವ್ಯಾಪಾರ, ಹೂಡಿಕೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಕ್ಷೇತ್ರಗಳಲ್ಲಿ ಎಐ, ನಾವೀನ್ಯತೆ ಮತ್ತು ಕೌಶಲ್ಯಾಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಯೋಗ ಉತ್ತೇಜಿಸಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಸ್ಲೋವಾಕ್ ಗಣರಾಜ್ಯದ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ ವ್ಯಾಪಾರ ಮತ್ತು ಹೂಡಿಕೆ, ಡಿಜಿಟಲ್ ತಂತ್ರಜ್ಞಾನ, ರಕ್ಷಣೆ, ಬಾಹ್ಯಾಕಾಶ, ಇಂಧನ, ಸಂಸ್ಕೃತಿ ಮತ್ತು ಜನರಿಂದ ಜನರ ಸಂಪರ್ಕಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರ ಹೆಚ್ಚಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಬಳಿಕ ಪ್ರಧಾನಿ ಅವರು, ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಇಂಧನ, ಸಂಪರ್ಕ, ಮೂಲಸೌಕರ್ಯ, ಆರೋಗ್ಯ ರಕ್ಷಣೆ, ಸಂಸ್ಕೃತಿ, ಕಡಲ ಆರ್ಥಿಕತೆ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವೆ ಸಹಕಾರ ಬಲಪಡಿಸುವ ನಿಟ್ಟಿನಲ್ಲಿ ಚರ್ಚಿಸಿದರು. ಇತ್ತೀಚಿನ ದಿನಗಳಲ್ಲಿ ಭಾರತ-ಶ್ರೀಲಂಕಾ ಸಂಬಂಧಗಳಲ್ಲಿನ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಸಭೆಯಲ್ಲಿ ವಿಶ್ವಸಂಸ್ಥೆಯ ಸುಧಾರಣೆಗಳ ಕುರಿತು ತಮ್ಮ ದೃಷ್ಟಿಕೋನಗಳನ್ನು ಉಭಯ ನಾಯಕರು ವಿನಿಮಯ ಮಾಡಿಕೊಂಡಿದರು. ಉತ್ತಮ ಜಗತ್ತಿಗಾಗಿ ಕೃತಕಬುದ್ಧಿಮತ್ತೆಯನ್ನು ಬಳಸಿಕೊಳ್ಳವು ಗುರಿಯನ್ನು ಹೊಂದಿರುವ ಯಾವುದೇ ಪ್ರಯತ್ನಕ್ಕೆ ಭಾರತದ ಬೆಂಬಲವನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದರು.ಇಂದು ಪ್ರಧಾನಿ ಮತ್ತು ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ನವದೆಹಲಿಯಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಉಭಯ ನಾಯಕರು ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದ್ದಾರೆ. ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರ, ಸುಧಾರಿತ ಬಹುಪಕ್ಷೀಯತೆ, ಜಾಗತಿಕ ಆಡಳಿತ ಮತ್ತು ಜಾಗತಿಕ ದಕ್ಷಿಣಕ್ಕೆ ಸಂಬಂಧಿಸಿದ ಸಮಸ್ಯೆಗಳು ಸೇರಿದಂತೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

**********

ಇಂದು ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯ ಕೊನೆಯ ದಿನ. ಪ್ರದರ್ಶಕರು, ನಾವೀನ್ಯಕಾರರು ಮತ್ತು ಸಂದರ್ಶಕರಿಂದ ಅಗಾಧ ಪ್ರತಿಕ್ರಿಯೆ ವ್ಯಕ್ತವಾದ ಕಾರಣ ಕೇಂದ್ರ ಸರ್ಕಾರವು ಶೃಂಗಸಭೆಯನ್ನು ಮತ್ತೊಂದು ದಿನಕ್ಕೆ ವಿಸ್ತರಿಸಿದೆ. ಶೃಂಗಸಭೆ ಇಂದು ಬೆಳಗ್ಗೆ ೯:೧೫ ರಿಂದ ಸಂಜೆ ೬ ರವರೆಗೆ ನಡೆಯಲಿದೆ.

**********

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳಲ್ಲಿನ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

**********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೂತನ ಜಾಗತಿಕ ಸುಂಕ ಆದೇಶವನ್ನು ಘೋಷಿಸಿದ ನಂತರ ಭಾರತ ತಾತ್ಕಾಲಿಕವಾಗಿ ಶೇಕಡಾ ೧೦ ರಷ್ಟು ಸುಂಕವನ್ನು ಎದುರಿಸಬೇಕಾಗುತ್ತದೆ ಎಂದು ಶ್ವೇತಭವನ ತಿಳಿಸಿದೆ. ಹೊಸ ಸುಂಕವು ಅಮೆರಿಕ  ಸುಪ್ರೀಂ ಕೋರ್ಟ್ ರದ್ದುಗೊಳಿಸಿದ ಹಿಂದಿನ ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ ಆಧಾರಿತ ಸುಂಕ ನಿಯಮಗಳನ್ನು ಬದಲಾಯಿಸುತ್ತದೆ.

ಸೆಕ್ಷನ್ ೧೨೨ ರ ಅಡಿಯಲ್ಲಿ ಹೊಸದಾಗಿ ಘೋಷಿಸಲಾದ ಶೇಕಡಾ ೧೦ ರಷ್ಟು ಜಾಗತಿಕ ಸುಂಕವು ಭಾರತದ ಮೇಲೆ ಹಿಂದೆ ವಿಧಿಸಲಾದ IಇಇP೦ ಸುಂಕಗಳಿಗೆ ಹೆಚ್ಚುವರಿವಲ್ಲ. ಆದರೆ ಇದೀಗ ತಾತ್ಕಾಲಿಕವಾಗಿ ಶೇಕಡಾ ೧೦ ರಷ್ಟು ಸುಂಕ ಮಾತ್ರ ವಿಧಿಸಲಾಗುತ್ತದೆ ಎಂದು ಶ್ವೇತಭವನ ಸ್ಪಷ್ಟಪಡಿಸಿದೆ.

**********

ಭಾರತ ಮತ್ತು ಅಮೆರಿಕ ಎರಡೂ ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸಲು ಕೆಲಸ ಮಾಡುತ್ತಿವೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ. ನವದೆಹಲಿಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಮುಖ್ಯ ಸಮಾಲೋಚಕರ ನೇತೃತ್ವದ ಭಾರತದ ನಿಯೋಗವು ಮುಂದಿನ ವಾರ ಅಮೆರಿಕಕ್ಕೆ ಭೇಟಿ ನೀಡಲಿದೆ. ಇತ್ತೀಚೆಗೆ ವಾಷಿಂಗ್ಟನ್ ಡಿಸಿಯಲ್ಲಿ ನಡೆದ ಶಾಂತಿ ಮಂಡಳಿಯ ಸಭೆಯಲ್ಲಿ ಭಾರತ ವೀಕ್ಷಕನಾಗಿ ಭಾಗವಹಿಸಿದೆ ಎಂದು ತಿಳಿಸಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಗಾಜಾ ಶಾಂತಿ ಯೋಜನೆ ಉಪಕ್ರಮವನ್ನು ಮತ್ತು ವಿಶ್ವಸಂಸ್ಥೆ ಭದ್ರತಾ ಮಂಡಳಿಯ ನಿರ್ಣಯ ೨೮೦೩ ರ ಭಾಗವಾಗಿ ನಡೆಯುತ್ತಿರುವ ಪ್ರಯತ್ನಗಳನ್ನು ಭಾರತ ಸ್ವಾಗತಿಸಿದೆ ಎಂದು ಅವರು ಹೇಳಿದರು. ಇದೇ ವೇಳೆ, ವಾಣಿಜ್ಯಿಕವಾಗಿ ಕಾರ್ಯಸಾಧ್ಯವಾದರೆ ವೆನೆಜುವೆಲಾದಿಂದ ತೈಲ ಖರೀದಿಸುವುದನ್ನು ಭಾರತ ಪರಿಗಣಿಸುತ್ತದೆ ಎಂದು ರಣಧೀರ್ ಜೈಸ್ವಾಲ್ ಪುನರುಚ್ಚರಿಸಿದರು.

**********

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ 'ಬಿ' ಗುಂಪಿನ ಕೊನೆಯ ಲೀಗ್ ಪಂದ್ಯದಲ್ಲಿ ಒಮಾನ್ ವಿರುದ್ಧ ಆಸ್ಟ್ರೇಲಿಯಾ ೯ ವಿಕೆಟ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಒಮಾನ್, ೧೬.೨ ಓವರ್‌ಗಳಲ್ಲಿ ೧೦೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಗೆಲುವಿನ ಗುರಿ ಬೆನ್ನತ್ತಿರುವ ಆಸ್ಟ್ರೇಲಿಯಾ ೯.೪ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೦೮ ರನ್ ಗಳಿಸುವ ಮೂಲಕ ಗೆಲುವಿನ ಗುರಿ ಬೀರಿತು. ಇಂದು ಸೂಪರ್ ೮ರ ಹಂತ ಆರಂಭವಾಗಲಿದೆ. ಉದ್ಘಾಟನಾ ಪಂದ್ಯದಲ್ಲಿ, ನ್ಯೂಜಿಲೆಂಡ್ ಇಂದು ಸಂಜೆ ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

ಏತನ್ಮಧ್ಯೆ, ಭಾರತ ತಂಡ ನಾಳೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ತನ್ನ ಸೂಪರ್ ೮ರ ಅಭಿಯಾನ ಪ್ರಾರಂಭಿಸಲಿದೆ.

**********

ಆಸ್ಟ್ರೇಲಿಯಾದ ಅಡಿಲೇಡ್‌ನ ಓವಲ್ ಕ್ರೀಡಾಂಗಣದಲ್ಲಿಂದು ನಡೆಯುವ ಸರಣಿಯ ೩ನೇ ಮತ್ತು ಅಂತಿಮ ಟಿ-೨೦ ಪಂದ್ಯದಲ್ಲಿ ಭಾರತ ಮಹಿಳಾ ತಂಡ, ಆಸ್ಟ್ರೇಲಿಯಾ ಮಹಿಳಾ ತಂಡದ ವಿರುದ್ಧ ಸೆಣಸಾಟ ನಡೆಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೬.೪೫ಕ್ಕೆ ಆರಂಭವಾಗಲಿದೆ. ಈಗಾಗಲೇ ಉಭಯ ತಂಡಗಳು ತಲಾ ಒಂದು ಪಂದ್ಯಗಳನ್ನು ಗೆದ್ದಿದ್ದು, ಸರಣಿ ಗೆಲುವಿಗೆ ಈ ಪಂದ್ಯ ನಿರ್ಣಾಯಕವಾಗಿದೆ.

**********